## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ರಾಜಶೇಖರ್ ಹೆಸರೂರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪವಿಭಾಗ, ಲಿಂಗಸಗೂರು ಇವರು ಕಛೇರಿಯ ಮಹಿಳಾ ಸಿಬ್ಬಂದಿಗೆ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡಿ ದುರ್ನಡತೆ ಎಸಗಿರುವ ಬಗ್ಗೆ - ಶಿಸ್ತು ಕ್ರಮ ಬಾಕಿ ಇರಿಸಿ, ಸೇವೆಯಿಂದ ಅಮಾನತ್ತು ಪಡಿಸುವ ಬಗ್ಗೆ- ಆದೇಶ.

**ಓದಲಾಗಿದೆ:**

1. ಯೋಜನಾ ಉಪವಿಭಾಗ, ಲಿಂಗಸಗೂರು ಕಛೇರಿಯ ಮಹಿಳಾ ಸಿಬ್ಬಂದಿಯೋರ್ವರು ಸಲ್ಲಿಸಿರುವ ದೂರು ಮನವಿ ದಿನಾಂಕ:20.6.2018.
2. ಇದೇ ಸಮ ಸಂಖ್ಯೆಯ ಪತ್ರ ದಿನಾಂಕ:23.6.2018.
3. ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪತ್ರ ಸಂಖ್ಯೆ:ಜಿಪಂರಾ/ಯೋಜನೆ/ ಪಿ.ಎಂ.ಜಿ.ಎಸ್.ವೈ /ವಿಚಾರಣೆ/2018-19, ದಿ:27.6.2018.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ, ಬೆಂಗಳೂರು ಇವರ ಪತ್ರ ಸಂಖ್ಯೆ:ಕೆ.ಆರ್.ಆರ್.ಡಿ.ಎ/ ಇಎಸ್‌ಟಿ/01/2018-19/1184, ದಿನಾಂಕ:5.7.2018.

*******

**ಪ್ರಸ್ತಾವನೆ:-**

ಶ್ರೀ ರಾಜಶೇಖರ್ ಹೆಸರೂರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪವಿಭಾಗ, ಲಿಂಗಸಗೂರು ಇವರು ತಮ್ಮ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗೆ ಮಾನಸಿಕ ಹಾಗೂ ದೈಹಿಕ ಕಿರುಕುಳ ನೀಡುತ್ತಿರುವ ಬಗ್ಗೆ ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:20.6.2018 ರಲ್ಲಿ ಮಹಿಳಾ ಸಿಬ್ಬಂದಿಯೋರ್ವರು ಸರ್ಕಾರಕ್ಕೆ ದೂರನ್ನು ಸಲ್ಲಿಸಿ, ಈ ಕಾರಣದಿಂದ ತಾವು ಖಿನ್ನತೆಗೆ ಒಳಗಾಗಿದ್ದು ತಮಗೆ ನ್ಯಾಯ ದೊರಕಿಸಿಕೊಡಬೇಕೆಂದು ಕೋರಿರುತ್ತಾರೆ.

ಮಹಿಳಾ ಸಿಬ್ಬಂದಿಯವರು ತಮ್ಮ ಮನವಿಯ ಜೊತೆ ದಾಖಲೆಯಾಗಿ ಸಲ್ಲಿಸಿರುವ ದೂರು ಅರ್ಜಿ ಹಾಗೂ Compact Disk ನ್ನು ಪರಿಶೀಲಿಸಲಾಗಿ ಶ್ರೀ ರಾಜಶೇಖರ್ ಹೆಸರೂರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ದೂರು ಸಲ್ಲಿಸಿರುವ ಮಹಿಳೆಯೊಂದಿಗೆ ಮೊಬೈಲ್ ಮೂಲಕ ಅನುಚಿತವಾಗಿ ವರ್ತಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಕಂಡುಬಂದಿರುತ್ತದೆ. ಅದ್ದಾಗ್ಯೂ, ಸದರಿ ದೂರಿನ ಬಗ್ಗೆ ಮೇಲೆ ಓದಲಾದ ಕ್ರಮಾಂಕ (3) ಮತ್ತು (4) ರಲ್ಲಿ ಕ್ರಮವಾಗಿ ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಮತ್ತು ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ, ಬೆಂಗಳೂರು ಇವರಿಂದ ವರದಿಯನ್ನು ಪಡೆಯಲಾಗಿದೆ.

ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ವರದಿಯಲ್ಲಿ ದೂರುದಾರರು ಆರೋಪಿಸಿರುವಂತೆ ಶ್ರೀ ರಾಜಶೇಖರ್ ಹೆಸರೂರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಯೋಜನಾ ಉಪವಿಭಾಗ, ಲಿಂಗಸಗೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು ಬಾಧಿತ ಮಹಿಳಾ ಸಿಬ್ಬಂದಿಯ ಮೇಲಾಧಿಕಾರಿಯಾಗಿರುತ್ತಾರೆಂದು, ಸದರಿಯವರು ದಿನಾಂಕ:27.4.2018 ಮತ್ತು 30.4.2018 ರಂದು ಭಾಧಿತ ಮಹಿಳಾ ಸಿಬ್ಬಂದಿಯೊಂದಿಗೆ ತಲಾ 6 ನಿಮಿಷಗಳ ಕಾಲ ಮಾತನಾಡಿರುವುದು ಕಂಡು ಬಂದಿರುತ್ತದೆಯೆಂದು, ಸದರಿ ದಿನಾಂಕಗಳಂದು ಜರುಗಿದ ಸಂಭಾಷಣೆಯಲ್ಲಿ ಆರೋಪಿತರಾದ ಶ್ರೀ ರಾಜಶೇಖರ್ ಹೆಸರೂರು ಇವರು ಮಹಿಳಾ ಸಿಬ್ಬಂದಿಯೊಂದಿಗೆ ಅಸಭ್ಯವಾಗಿ ಮಾತನಾಡಿರುವುದು ಸ್ಪಷ್ಟವಾಗಿ ಕಂಡು ಬರುತ್ತದೆಂದು ತಿಳಿಸಿರುತ್ತಾರೆ.

ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ. ಇವರು ಸಲ್ಲಿಸಿರುವ ವರದಿಯಲ್ಲಿ ಭಾದಿತ ಸಿಬ್ಬಂದಿಯ ಮೊಬೈಲೆಗೆ ವ್ಯಾಟ್ಸಪ್‌ನಲ್ಲಿ ಕಳುಹಿಸಿರುವ ಸಂಭಾಷಣೆ, ವಿಡಿಯೋಗಳನ್ನು ಪರಿಶೀಲಿಸಲಾಗಿ, ಶ್ರೀ. ರಾಜಶೇಖರ್ ಹೆಸರೂರು ಇವರು ತಮ್ಮ ಕಛೇರಿಯ ಅಧೀನ ಸಿಬ್ಬಂದಿಯೊಂದಿಗೆ ಸಂಭಾಷಣೆ ನಡೆಸಿರುವುದು ಹಾಗೂ ಕಛೇರಿ ಕಟ್ಟಡದ ಮಹಡಿಯ ಮೇಲೆ ಮಧ್ಯಪಾನ ಸೇವಿಸಿರುವುದು ವಾಸ್ತುವಾಂಶದಿಂದ ಕೂಡಿರುತ್ತದೆ ಎಂದು ತಿಳಿಸಿರುತ್ತಾರೆ.

ಆರೋಪಿತ ಅಧಿಕಾರಿಯು ಉನ್ನತ ಹುದ್ದೆಯಲ್ಲಿದ್ದು, ತಮ್ಮ ಅಧೀನ ಸಿಬ್ಬಂದಿಯ ಜೊತೆ ಅಸಭ್ಯವಾಗಿ ವರ್ತಿಸುವುದರ ಜೊತೆಗೆ ಲೈಂಗಿಕ ಕಿರುಕುಳ ನೀಡಿರುವುದು, ಕಛೇರಿಯ ವೇಳೆಯಲ್ಲಿ ಕಛೇರಿಯಲ್ಲಿಯೇ ಮಧ್ಯಪಾನ ಮಾಡಿರುವುದು ಲಭ್ಯವಿರುವ ಸಾಕ್ಷ್ಯಾಧಾರಗಳಿಂದ ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯ ಮೇಲೆ ನಡೆಯುವ ಲೈಂಗಿಕ ಕಿರುಕುಳ ನೀಡುವುದು ಗಂಭೀರ ಸ್ವರೂಪದ ದುರ್ನಡತೆಯಾಗಿದ್ದು ಇದನ್ನು ತಡೆಯುವ ಸಲುವಾಗಿ ಸರ್ಕಾರವು ಹಲವಾರು ಮಾರ್ಗಸೂಚನೆಗಳನ್ನು ನೀಡಿರುತ್ತದೆ.

ಆದ್ದರಿಂದ, ಶ್ರೀ ರಾಜಶೇಖರ್ ಹೆಸರೂರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರು ತಮ್ಮ ಅಧೀನ ಸಿಬ್ಬಂದಿಗೆ ಲೈಂಗಿಕ ಕಿರುಕುಳ ನೀಡಿ ಗಂಭೀರ ಸ್ವರೂಪದ ಕರ್ತವ್ಯ ಲೋಪ ಮತ್ತು ದುರ್ನಡತೆ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3 (1) (iii) ಹಾಗೂ 29 (ಬಿ)ನ್ನು ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವ ಆರೋಪವು ಮೇಲ್ನೋಟಕ್ಕೆ ಸಾಭೀತಾಗುವಂತೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಸದರಿಯವರ ದುರ್ನಡತೆ ಸಂಬಂಧಿಸಿದಂತೆ ಶಿಸ್ತು ಕ್ರಮ ಕೈಗೊಳ್ಳುವುದನ್ನು ಬಾಕಿ ಇಟ್ಟು ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತು ಪಡಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಆದೇಶ ಸಂಖ್ಯೆ: ಗ್ರಾಅಪ 243 ಜಿಪಅ 2018, ಬೆಂಗಳೂರು, ದಿನಾಂಕ:06.07.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ ಸರ್ಕಾರವು ಶ್ರೀ ರಾಜಶೇಖರ್ ಹೆಸರೂರು, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಆರೋಪದ ಬಗ್ಗೆ ಶಿಸ್ತು ಕ್ರಮ ಕೈಗೊಳ್ಳುವುದನ್ನು ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು, 1957 ರ ನಿಯಮ 10 (1)(ಡಿ) ರ ಅನುಸಾರ ಸೇವೆಯಿಂದ ಅಮಾನತ್ತು ಪಡಿಸಿದೆ.

ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ ಮತ್ತು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಸದರಿ ಅಧಿಕಾರಿಯ ಲೀನ್ ಅನ್ನು ಮುಖ್ಯ ಕಾರ್ಯಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ. ಬೆಂಗಳೂರು ಇವರ ಕಛೇರಿಗೆ ವರ್ಗಾಯಿಸಿದೆ.

............

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

06/07/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2) / (ಆಡಿಟ್) ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
3. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ ವೃತ್ತ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ವೃತ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು – ಇವರಿಗೆ ಕೂಡಲೇ ಶ್ರೀ ರಾಜಶೇಖರ್ ಹೆಸರೂರು, ಸ.ಕಾ.ಇಂ ಇವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಸೂಚಿಸಿದೆ.
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು–ಎ ಮತ್ತು ಸಿ).
7. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
9. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.